ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಕಾರ್ಮಿಕ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 22/10/20

**ನಾಳೆ: ಕಾಲರಾತ್ರಿ**

# ವೇತನ ಸಹಿತ ರಜೆ: ಆದೇಶ ಹೊರಡಿಸಲು ನಿರ್ದೇಶನ

**ಬೆಂಗಳೂರು:** ಕೋವಿಡ್ ಸೋಂಕಿತರು ಅಥವಾ ಪ್ರಾಥಮಿಕ ಸಂಪರ್ಕಕ್ಕೆ ಒಳಗಾದ ಕಾರ್ಮಿಕರಿಗೆ ವೇತನ ಸಹಿತ ರಜೆ ನೀಡುವ ಸಂಬಂಧ ಸೂಕ್ತ ಆದೇಶ ಹೊರಡಿಸಲು ಹೈಕೋರ್ಟ್ ರಾಜ್ಯ ಸರಕಾರಕ್ಕೆ ಬುಧವಾರ ನಿರ್ದೇಶನ ನೀಡಿದೆ.



ಎಐಟಿಯುಸಿ ಸಂಘಟನೆ ಸಲ್ಲಿಸಿರುವ ಪಿಐಎಲ್‌ನ್ನು ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎ. ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಈ ನಿರ್ದೇಶನ ನೀಡಿ ವಿಚಾರಣೆಯನ್ನು ನ. 9ಕ್ಕೆ ಮುಂದೂಡಿತು.

ಕೆಲ ಕಾಲ ವಾದ-ಪ್ರತಿವಾದ ಆಲಿಸಿದ ಪೀಠ, ''ಕಳೆದ ವಿಚಾರಣೆ ವೇಳೆಯೇ ಕಾರ್ಮಿಕರ ಕ್ವಾರಂಟೈನ್ ಅವಧಿ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿತ್ತು, ಆದರೆ, ಸರಕಾರ ಯಾವುದೇ ಕ್ರಮ ಕೈಗೊಂಡಿಲ್ಲ'' ಎಂದು ಆಕ್ಷೇಪಿಸಿತು.

ಅಲ್ಲದೆ, ''ಕಾರ್ಮಿಕರು ಸೋಂಕಿಗೆ ತುತ್ತಾದಲ್ಲಿ ಅಥವಾ ಪ್ರಾಥಮಿಕ ಸಂಪರ್ಕಕ್ಕೆ ಒಳಗಾದಲ್ಲಿ ಕ್ವಾರಂಟೈನ್ ಅವಧಿಯನ್ನು ರಜೆ ಅಥವಾ ಗೈರು ಹಾಜರಿ ಎಂದು ಪರಿಗಣಿಸದಂತೆ ರಾಜ್ಯ ಸರಕಾರ ಸೂಕ್ತ ಆದೇಶ ಹೊರಡಿಸಬೇಕು'' ಎಂದು ನಿರ್ದೇಶಿಸಿತು.